ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಸುನೀಲ್‌ಗೌಡ ಬಿ. ಪಾಟೀಲ್ ರವರ ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರ ಹೇಳಿಕೆ.

## ಸೂಚನೆಯ ವಿಷಯ

ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳ ಭ್ರಷ್ಟಾಚಾರಗಳ ಕುರಿತು ಕುರಿತು ಜಿಲ್ಲಾಧಿಕಾರಿಯವರು ನೀಡಿರುವ ವರದಿ ಆಧಾರದ ಮೇಲೆ ಕ್ರಮ ಕೈಗೊಳ್ಳುವ ಕುರಿತು.

## ಮಾನ್ಯ ಪೌರಾಡಳಿತ ಸಚಿವರ ಉತ್ತರ

ದಿನಾಂಕ:24.09.2021 ರಲ್ಲಿ ಜಿಲ್ಲಾಧಿಕಾರಿಗಳು, ವಿಜಯಪುರ ರವರು ಸಲ್ಲಿಸಿರುವ ಶಿಸ್ತು ಪ್ರಸ್ತಾವನೆಯಂತೆ ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ.ಡಿ.ಎನ್.ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರು ಈ ಹಿಂದೆ ನಿಡಗುಂದಿ ಪಟ್ಟಣ ಪಂಚಾಯಿತಿಯಲ್ಲಿ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ನಡೆಸಿದ ಭ್ರಷ್ಟಾಚಾರ ಮತ್ತು ಕರ್ತವ್ಯಲೋಪಗಳ ಕುರಿತು ನಿರ್ದೇಶನಾಲಯದಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಸಲುವಾಗಿ ಸಿಸಿಎ ನಿಯಮಾವಳಿಗಳ 1957 ರ ನಿಯಮ 11ರಡಿ ದೋಷಾರೋಪಣಾ ಪಟ್ಟಿಯನ್ನು ಸಿದ್ದಪಡಿಸಿ, ಸದರಿಯವರಿಗೆ ಜಾರಿಗೊಳಿಸಿ, ಸ್ವೀಕೃತಿಯನ್ನು ಪಡೆದು ಸಲ್ಲಿಸಲು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ವಿಜಯಪುರ ಜಿಲ್ಲೆ ಇವರಿಗೆ ದಿ:18.12.2021 ರಲ್ಲಿ ನೋಂದಾಯಿತ ಅಂಚೆ ಮೂಲಕ ಕಳುಹಿಸಿ ಕೊಡಲಾಗಿದೆ. ಸದರಿ ನೋಟಿಸಿನಲ್ಲಿ ಆಪಾದಿತರಾದ ಶ್ರೀ.ಡಿ.ಎನ್. ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರಿಗೆ ತಮ್ಮ ವಿರುದ್ಧದ ಆರೋಪಗಳ ಕುರಿತಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಲು ಸೂಚಿಸಲಾಗಿದೆ. ಸದರಿಯವರು ತಮ್ಮ ವಿರುದ್ಧದ ದೋಷಾರೋಪಣೆಗಳಿಗೆ ಸಂಬಂಧಿಸಿದಂತೆ ಸಮಜಾಯಿಷಿಯನ್ನು ಸಲ್ಲಿಸಿ, ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಸದರಿ ನೌಕರರು ಸಲ್ಲಿಸಿರುವ ಸಮಜಾಯಿಷಿಯು ಸಮಂಜಸವಾಗಿಲ್ಲದೆ ಇರುವುದರಿಂದ ಪ್ರಕರಣದ ಸತ್ಯಾಸತ್ಯತೆ ಪರಾಮರ್ಶೆಗಾಗಿ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ನಿರ್ದೇಶನಾಲಯದ ದಿ:20.05.2022 ರ ಆದೇಶದಲ್ಲಿ ನಿವೃತ್ತ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಪೂರ್ಣಗೊಳಿಸಿ ವಿಚಾರಣಾ ವರದಿಯನ್ನು ಶಿಸ್ತು ಪ್ರಾಧಿಕಾರವಾದ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರಿಗೆ ದಿನಾಂಕ:12.12.2022 ರಂದು ಸಲ್ಲಿಸಿರುತ್ತಾರೆ. ಆಪಾದಿತ ನೌಕರರಿಗೆ ವಿಚಾರಣಾ ವರದಿಯ ಮೇಲೆ 2ನೇ ಕಾರಣ ಕೇಳಿ ನೋಟಿಸನ್ನು ದಿನಾಂಕ 14.12.2022 ರಂದು ಜಾರಿ ಮಾಡಲಾಗಿದೆ. ಸದರಿಯವರು ನೀಡುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ, ಶಿಸ್ತು ಪ್ರಾಧಿಕಾರವು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ:ನಅಇ 12 ಎಲ್‌ಸಿಕ್ಯೂ 2022

(ಎನ್.ನಾಗರಾಜು ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ
ವಲಯ ಉದ್ಯಮಗಳ ಸಚಿವರು.